2009.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-1) ಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:1) ಸರ್ಕಾರದ ಆದೇಶ ಸಂಖ್ಯೆ:ನಅಇ 92 ಬೆಂರೂಪ್ರಾ 2007 ದಿನಾಂಕ:11.03.2008.

2) ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಚಿತ್ರದುರ್ಗ ಇವರ ಪತ್ರ ಸಂಖ್ಯೆ: ನಯೋಚಿ/ ಸನಿ/ ಚಿತ್ರದುರ್ಗ/ಚ.ಕೆರೆ/ಮ.ಯೋಪ/08-09 ದಿನಾಂಕ:18.09.2008.

3) ನಗರ ಯೋಜನಾ ನಿರ್ದೇಶಕರ ಕಾರ್ಯಾಲಯದ ಏಕ ಕಡತ ಸಂಖ್ಯೆ: ನಯೋ(13):ಜಂನಿ(ಬೆಂವಿ)ಮಯೋ(ಪ್ರ-1) /ಅಂತಿಮ/ 474/2008-09 ದಿನಾಂಕ:19.01.2009 ರಲ್ಲಿ ನೀಡಿರುವ ಅಭಿಪ್ರಾಯ.

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಚಳ್ಳಕೆರೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ-1) ಕ್ಕೆ ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ನಗರ ಯೋಜನಾ ಸಹಾಯಕ ನಿರ್ದೇಶಕರು, ಚಿತ್ರದುರ್ಗ ಇವರು ಚಳ್ಳಕೆರೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ-1)ರ ನಕ್ಷೆ ಹಾಗೂ ವರದಿಯನ್ನು ತಯಾರಿಸಿ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ, ಶಿಫಾರಸ್ಸಿನೊಂದಿಗೆ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ಏಕ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು, ಚಳ್ಳಕೆರೆ ಪಟ್ಟಣದ ಜನಸಂಖ್ಯೆಯು 2021ರಲ್ಲಿ 1,25,000 ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆ (ಪರಿಷ್ಕೃತ-1) ಯನ್ನು ರೂಪಿಸಲಾಗಿದೆ. ಚಳ್ಳಕೆರೆ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 3216 ಹೆಕ್ಟೇರ ಪ್ರದೇಶದಲ್ಲಿ 1348.65 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾ ಯೋಜನೆಗೆ (ಪರಿಷ್ಕೃತ-1) ಯನ್ನು ರೂಪಿಸಲಾಗಿದೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ (9) ರಿಂದ (12) ರಲ್ಲಿನ ಅಂಶಗಳನ್ನು ಪರಿಗಣಿಸಿ, ಚಳ್ಳಕೆರೆ ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ 1348.65 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 667.82 ಹೆಕ್ಟೇರ್ (ಶೇಕಡ 49.74), ವಾಣಿಜ್ಯಕ್ಕಾಗಿ 52.19 ಹೆಕ್ಟೇರ್ (ಶೇಕಡ 3.86), ಕೈಗಾರಿಕೆಗಾಗಿ 174.54 ಹೆಕ್ಟೇರ್ (ಶೇಕಡ 13.00), ಸಾರ್ವಜನಿಕ:ಅರೆ ಸಾರ್ವಜನಿ ವಲಯಕ್ಕೆ 81.47 ಹೆಕ್ಟೇರ್ (ಶೇಕಡ 6.07), ಉದ್ಯಾನವನ:ಬಯಲು ಜಾಗೆಗಳಿಗೆ 128.89 ಹೆಕ್ಟೇರ್ (ಶೇಕಡ 9.60), ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 237.78 ಹೆಕ್ಟೇರ್ (ಶೇಕಡ 17.70) ಮತ್ತು ಜಲಾವೃತ್ತ ಪ್ರದೇಶಕ್ಕಾಗಿ 5.96 ಹೆಕ್ಟೇರ್ ಪ್ರದೇಶವನ್ನು ಒಳಗೊಂಡಿರುತ್ತದೆ. ಮಹಾಯೋಜನೆಗೆ (ಪರಿಷ್ಕೃತ-1) ಅನುಷ್ಠಾನಗೊಳಿಸಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದೆ.

ದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 3(3) ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ. ನಅಇ 45 ಬೆಂಮ್ರಾ 2009, ಬೆಂಗಳೂರು, ದಿನಾಂಕ: 25.02.2009**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಚಳ್ಳಕೆರೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ-1) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆ (ಪರಿಷ್ಕೃತ-1) ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ರವರಿಗೆ ಪ್ರಕಟಣೆಗಾಗಿ ಹಾಗೂ ಪ್ರಕಟಿತ 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಲು ಕೋರಿದೆ.

ಪ್ರತಿಗಳು:

1) ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ
2) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
3) ಅಧ್ಯಕ್ಷರು, ಚಿತ್ರದುರ್ಗ ನಗರ ಯೋಜನಾ ಪ್ರಾಧಿಕಾರ, ಚಿತ್ರದುರ್ಗ.
4) ನಗರ ಯೋಜನಾ ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಚಿತ್ರದುರ್ಗ.
5) ಮಾನ್ಯ ನಗರಾಭಿವೃದ್ಧಿ ಸಚಿವರ, ಆಪ್ತ ಕಾಯದರ್ಶಿ, ವಿಧಾನಸೌದ, ಬೆಂಗಳೂರು.
6) ಸರ್ಕಾರದ ಕಾರ್ಯದರ್ಶಿಗಳ/ಜಂಟಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
7) ಕರ್ನಾಟಕ ರಾಜ್ಯಪತ್ರ.
8) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.